ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಅತಿಥಿ ಉಪನ್ಯಾಸಕರ ಸೇವಾ ಭದ್ರತೆ ಕುರಿತು

ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-

935 (1178) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪದವಿ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ; (ಅವರಿಗೆ ನೀಡಲಾಗುತ್ತಿರುವ ಸೇವಾ ಸೌಲಭ್ಯಗಳ ವಿವರಗಳನ್ನು ಸಂಪೂರ್ಣ ವಿವರದೊಂದಿಗೆ ನೀಡುವುದು)

(ಆ) ಅತಿಥಿ ಉಪನ್ಯಾಸಕರಿಗೆ ನಿಯಮಿತವಾಗಿ ತಿಂಗಳಿಗೆ ಸರಿಯಾಗಿ ವೇತನ ಬಿಡುಗಡೆಯಾಗದೇ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವೇತನವನ್ನು ಸರಿಯಾದ ಸಮಯಕ್ಕೆ ಬಿಡುಗಡೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಅತಿಥಿ ಉಪನ್ಯಾಸಕರ ಸೇವಾ ಭದ್ರತೆ ವಿಚಾರವಾಗಿ ಸರ್ಕಾರದ ಸ್ಪಷ್ಟ ನಿಲುವೇನು ; ತೆಗೆದುಕೊಂಡ ಕ್ರಮಗಳೇನು ? (ವಿವರ ಒದಗಿಸುವುದು)